# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.

ಸಿ.ಸಿ. ನಂಃ 633/2015 ಸಿಡಬ್ಲೂ: 3 ಪಿಡಬ್ಲೂ: 4

ಪ್ರಮಾಣವಚನ ಬೋಧಿಸಲಾಯಿತು ದಿಃ 13-12-2024

ಹೆಸರು : ಶಿವಶರಣಪ್ಪ

ತಂದೆ ಹೆಸರು : ನಾಗಪ್ಪ

ವಯಸ್ಸು : 72 ವರ್ಷ

ಉದ್ಯೋಗ : ವ್ಯವಸಾಯ

ವಾಸಸ್ಥಳ : ಸೇಡಂ

**:ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ನ್ಯಾಯಾಲಯದ ಮುಂದೆ ಇರುವ ಆರೋಪಿತರು ನನಗೆ ಗೊತ್ತಿಲ್ಲ.

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ರೀತಿಯ ಮಾಹಿತಿ ಇರುವುದಿಲ್ಲ. ಪೋಲೀಸರು ನಮ್ಮ ಸಮಕ್ಷಮ ಯಾವುದೇ ರೀತಿಯ ಪಂಚನಾಮೆಗಳು ಮಾಡಿರುವುದಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಗುನ್ನೆ ಸ್ಥಳದ ಪಂಚನಾಮೆ ಆಗಿದ್ದು, ಸಾಕ್ಷಿಯು ಸದರಿ ದಾಖಲಾತಿ ನೋಡಿ ಗುರುತಿಸಿರುವುದರಿಂದ ಅದನ್ನು ನಿಪಿ-2 ಎಂದು ಗುರುತಿಸಲಾಗಿದೆ ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಆದರೇ ನಿಪಿ-2 ರಲ್ಲಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**ವಾಟೀಸವಾಲುಃ** ಮಾನ್ಯ ಸ.ಸ.ಅ ರವರಿಂದ:

ದಿಃ27-06-2015ರಂದು ಬೆಳಿಗ್ಗೆ 09-30 ಗಂಟೆಯಿಂದ 10.30 ಗಂಟೆಯವರೆಗೆ ಚಾಸಾ 1 ರವರು ತೋರಿಸಿದ ಗುನ್ನೆ ಸ್ಥಳದಲ್ಲಿ ಪೋಲೀಸರು ನನ್ನ ಹಾಗು ಚಾಸಾ 2 ರವರ ಸಮಕ್ಷಮ ಪಂಚನಾಜಮೆ ಮಾಡಿ ಒಂದು ಹಿಡಿ ಗಾತ್ರದ ಕಲ್ಲನ್ನು ವಶಕ್ಕೆ ಪಡೆದಿರುತ್ತಾರೆ ಎಂದರೆ ಸರಿಯಿಲ್ಲ. ನಿಪಿ-2ರಲ್ಲಿರುವ ವಿಷಯಗಳು ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಮು ಮಾ 1 ನ್ನು ನೋಡಿ ಗುರುತಿಸಲು ನಿರಾಕರಿಸಿರುತ್ತಾರೆ.

**ಪಾಟೀಸವಾಲು:** ಆರೋಪಿ ಪರ ವಕೀಲರಿಂದ: ವಕೀಲರು ಪಾಟೀಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

ಮರುವಿಚಾರಣೆ: ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**